# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 822
2. ಮಾನ್ಯ ಸದಸ್ಯರ ಹೆಸರು : ಶ್ರೀ ಚಿದಾನಂದ್ ಎಂ.ಗೌಡ
3. ಉತ್ತರಿಸಬೇಕಾದ ದಿನಾಂಕ : 20.09.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವಾಣಿ ಸಕ್ಕರೆ ಕಾರ್ಖಾನೆ ಪ್ರಾರಂಭಗೊಂಡಿದ್ದು ಯಾವಾಗ; ಮುಚ್ಚಲ್ಪಟ್ಟಿದ್ದು ಯಾವಾಗ; | ವಾಣಿವಿಲಾಸ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಿರಿಯೂರು, ಚಿತ್ರದುರ್ಗ ಜಿಲ್ಲೆ ಈ ಕಾರ್ಖಾನೆಯು ಸಹಕಾರ ಸಂಘಗಳ ಕಾಯ್ದೆ, 1959ರಡಿಯಲ್ಲಿ ನೋಂದಣಿಗೊಂಡು, ಸಹಕಾರ ವಲಯದಲ್ಲಿ 1971-72ನೇ ಸಾಲಿನಲ್ಲಿ ಪ್ರಾರಂಭಗೊಂಡಿರುತ್ತದೆ.<br>ಆರ್ಥಿಕ ಸಂಕಷ್ಟದಿಂದಾಗಿ ಮತ್ತು ಕಬ್ಬಿನ ಕೊರತೆಯಿಂದಾಗಿ ಕಾರ್ಖಾನೆಯು 2002-03ನೇ ಸಾಲಿನಿಂದ ಸ್ಥಗಿತಗೊಂಡಿರುತ್ತದೆ. |
| (ಆ) | ಈ ಸಕ್ಕರೆ ಕಾರ್ಖಾನೆಯ ವಿಸ್ತೀರ್ಣ ಎಷ್ಟು; ಪ್ರಸ್ತುತ ಕಾರ್ಖಾನೆಯು ಯಾವ ಸ್ಥಿತಿಯಲ್ಲಿದೆ; | ಪ್ರಸ್ತುತ ಕಾರ್ಖಾನೆಯು 270 ಎಕರೆ 37 ಗುಂಟೆ ವಿಸ್ತೀರ್ಣದ ಜಮೀನನ್ನು ಹೊಂದಿದ್ದು, ಆರ್ಥಿಕ ಸಂಕಷ್ಟದಿಂದಾಗಿ ಮತ್ತು ಕಬ್ಬಿನ ಕೊರತೆಯಿಂದಾಗಿ ಕಾರ್ಖಾನೆಯು 2002-03ನೇ ಸಾಲಿನಿಂದ ಸ್ಥಗಿತಗೊಂಡಿರುತ್ತದೆ. ಕಾರ್ಖಾನೆಯನ್ನು ದಿನಾಂಕ:01.09.2004ರಿಂದ ಸಮಾಪನೆಗೊಳಿಸಿ, ಆದೇಶಿಸಲಾಗಿತ್ತು. ನಂತರ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ದೃಷ್ಟಿಯಿಂದ ದಿನಾಂಕ:29.09.2007ರಂದು ಸಮಾಪನಾ ಆದೇಶವನ್ನು ಹಿಂದಕ್ಕೆ ಪಡೆದು, ಗುತ್ತಿಗೆ ಪ್ರಕ್ರಿಯೆ ಕೈಗೊಳ್ಳಲಾಗಿತ್ತು. ಗುತ್ತಿಗೆ ನೀಡುವ ಸರ್ಕಾರದ ಪ್ರಯತ್ನ ಯಶಸ್ವಿಯಾಗದ ಕಾರಣ ಪುನಃ ಕಾರ್ಖಾನೆಯನ್ನು ದಿನಾಂಕ:30.09.2013ರಿಂದ ಸಮಾಪನೆಗೊಳಿಸಿ, ಸಮಾಪನಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಲಾಗಿರುತ್ತದೆ. |
| (ಇ) | ವಾಣಿ ಸಕ್ಕರೆ ಕಾರ್ಖಾನೆಯಲ್ಲಿ ಸರ್ಕಾರ ಹೂಡಿರುವ ಬಂಡವಾಳ ಎಷ್ಟು; ರೈತರ ಬಂಡವಾಳ ಎಷ್ಟು; | ವಾಣಿವಿಲಾಸ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ರಾಜ್ಯ ಸರ್ಕಾರವು ರೂ.49.00 ಲಕ್ಷಗಳ ಷೇರು ಬಂಡವಾಳವನ್ನು ಹೊಂದಿರುತ್ತದೆ ಹಾಗೂ ರೈತರ ಮತ್ತು ಇತರೆ ಸಂಘ ಸಂಸ್ಥೆಗಳ ಷೇರು ಬಂಡವಾಳ ರೂ.89.05 ಲಕ್ಷಗಳಷ್ಟಿರುತ್ತದೆ. |
| (ಈ) | ಸದರಿ ಕಾರ್ಖಾನೆಯನ್ನು ಪುನರಾರಂಭಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು? | ಸರ್ಕಾರದ ಮುಂದೆ ಈ ರೀತಿಯ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಸಿಐ 183 ಸಿಓಎಫ್ 2022

(ಶಂಕರ.ಬಿ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು